# All India Radio: Bangalore
# National Bulletin In Kannada
# 28.04.2026  19.35 p.m.

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 28.04.2026  19.35 p.m.

****************

ಮುಖ್ಯಾಂಶಗಳು

೧. ದೇಶದ ನಾರಿಶಕ್ತಿಯೇ ವಿಕಸಿತ ಭಾರತದ ಅತ್ಯಂತ ಬಲಿಷ್ಠ ಸ್ತಂಭ - ಪ್ರಧಾನಿ ನರೇಂದ್ರ ಮೋದಿ

೨. ಭಯೋತ್ಪಾದನೆ, ಪ್ರತ್ಯೇಕತಾವಾದ ಮತ್ತು ಉಗ್ರವಾದ ಮಟ್ಟ ಹಾಕಲು ಒಗ್ಗಟಿನ ಮಂತ್ರ ಅನುಸರಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ

೩. ನಾಳೆಯ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಪಶ್ಚಿಮ ಬಂಗಾಳ ಸಜ್ಜು; ಸುಗಮ ಮತದಾನಕ್ಕಾಗಿ ಸಕಲ ಸಿದ್ಧತೆ

೪. ದೇಶದಲ್ಲಿ ಸದ್ಯಕ್ಕೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ - ಕೇಂದ್ರ ಸರ್ಕಾರ ಸ್ಪಷ್ಟನೆ

೫. ಕಾಮನ್‌ವೆಲ್ತ್ ಯೂತ್ ಮತ್ತು ಜೂನಿಯರ್ ವೈಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್; ಎರಡನೇ ದಿನವಾದ ಇಂದು ಭಾರತಕ್ಕೆ ೪ ಚಿನ್ನದ ಪದಕ

****************

ದೇಶದ ನಾರಿಶಕ್ತಿಯೇ ವಿಕಸಿತ ಭಾರತದ ಅತ್ಯಂತ ಬಲಿಷ್ಠ ಸ್ತಂಭ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ವಾರಾಣಸಿಯಲ್ಲಿ ಇಂದು ನಡೆದ ಮಹಿಳಾ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಕಲ್ಪಿಸುವ ರಾಷ್ಟ್ರೀಯ ಗುರಿಯನ್ನು ಸಾಕಾರಗೊಳಿಸಲು ಮಹಿಳೆಯರ ಆಶೀರ್ವಾದವನ್ನು ಕೋರಿದರು.

ಇದೇ ವೇಳೆ ಕಾಶಿ ಅಭಿವೃದ್ಧಿ ಪ್ರಯಾಣವನ್ನು ಪ್ರಸ್ತಾಪಿಸಿದ ಪ್ರಧಾನಿ, ಕಳೆದ ಒಂದು ದಶಕದಲ್ಲಿ ಕಾಶಿ ಉತ್ತರ ಮತ್ತು ಪೂರ್ವ ಭಾರತದ ಒಂದು ಪ್ರಮುಖ ಆರೋಗ್ಯ ಕೇಂದ್ರವಾಗಿ ಹೊರಹೊಮ್ಮುತ್ತಿದೆ. ೫೦೦ ಹಾಸಿಗೆಗಳ ಮಲ್ಟಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾಶಿಯ ಆರೋಗ್ಯ ಸೇವಾ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಿದೆ. ಇದರ ಜೊತೆಗೆ ೧೦೦ ಹಾಸಿಗೆಗಳ ಕ್ರಿಟಿಕಲ್ ಕೇರ್ ಘಟಕದ ಶಂಕುಸ್ಥಾಪನೆ ನೆರವೇರಿಸಲಾಗಿದ್ದು, ಇದರಿಂದ ಗಂಭೀರ ರೋಗಗಳ ಚಿಕಿತ್ಸೆಗೆ ಸೌಲಭ್ಯ ಒದಗಲಿದೆ ಎಂದು ತಿಳಿಸಿದರು.

ಧ್ವನಿ: ಪಿಎಂ

ಕಾರ್ಯಕ್ರಮದಲ್ಲಿ ಪ್ರಧಾನಿ, ರೈಲ್ವೆ, ರಸ್ತೆ ಮತ್ತು ಆರೋಗ್ಯ ಸೇರಿದಂತೆ ವಿವಿಧ ವಲಯಗಳಿಗೆ ಸಂಬಂಧಿಸಿದ ೬ ಸಾವಿರದ ३೫೦ ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಅವರು ಬನಾರಸ್-ಪುಣೆ ಮತ್ತು ಅಯೋಧ್ಯೆ-ಮುಂಬೈ ನಡುವೆ ಸಂಚರಿಸಲಿರುವ ಎರಡು ಹೊಸ 'ಅಮೃತ ಭಾರತ ಎಕ್ಸ್‌ಪ್ರೆಸ್' ರೈಲುಗಳಿಗೆ ಹಸಿರು ನಿಶಾನೆ ತೋರಿದರು.

ಗಂಗಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗುವ ರೈಲು-ರಸ್ತೆ ಸೇತುವೆ ಸೇರಿದಂತೆ ವಾರಾಣಸಿ-ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಜಂಕ್ಷನ್ ನಡುವಿನ ಹೆಚ್ಚುವರಿ ರೈಲ್ವೆ ಹಳಿ ಯೋಜನೆಗಳಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಿದರು.

ತಮ್ಮ ಪ್ರವಾಸದ ಎರಡನೇ ದಿನವಾದ ನಾಳೆ ಪ್ರಧಾನಿಯವರು ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಲಿದ್ದಾರೆ. ನಂತರ ಹರ್ದೋಯಿಗೆ ಭೇಟಿ ನೀಡಲಿರುವ ಅವರು, ಸುಮಾರು ३೬ ಸಾವಿರ ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ೫೯೪ ಕಿಲೋಮೀಟರ್ ಉದ್ದದ 'ಗಂಗಾ ಎಕ್ಸ್‌ಪ್ರೆಸ್‌ವೇ' ಅನ್ನು ಉದ್ಘಾಟಿಸಲಿದ್ದಾರೆ.

****************

ಭಯೋತ್ಪಾದನೆ, ಪ್ರತ್ಯೇಕತಾವಾದ ಮತ್ತು ಉಗ್ರವಾದ ಮಟ್ಟ ಹಾಕಲು ಜಾಗತಿಕ ರಾಷ್ಟ್ರಗಳು ಒಗ್ಗಟಿನ ಮಂತ್ರ ಅನುಸರಿಸಿ ಭಯೋತ್ಪಾದಕರಿಗೆ ಆಶ್ರಯ ನೀಡುವ ತಾಣಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕು ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ ನೀಡಿದ್ದಾರೆ.

ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ಇಂದು ನಡೆದ ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಮಾತನಾಡಿದ ಅವರು, ಭಯೋತ್ಪಾದನೆ ವಿಷಯದಲ್ಲಿ ಯಾವುದೇ ದ್ವಂದ್ವನಿಲುವುಗಳಿಗೆ ಅವಕಾಶವಿರಬಾರದು. ಒಂದು ರಾಷ್ಟ್ರದ ಸಾರ್ವಭೌಮತ್ವದ ಮೇಲೆ ದಾಳಿ ಮಾಡುವ ಸರ್ಕಾರಿ ಪ್ರಾಯೋಜಿತ ಗಡಿಯಾಚೆಗಿನ ಭಯೋತ್ಪಾದನೆಯನ್ನು ಎಂದಿಗೂ ಸಹಿಸಬಾರದು ಎಂದರು.

ಪಹಲ್ಗಾಮ್‌ನಲ್ಲಿ ನಡೆದ ಬೀಕರ ಭಯೋತ್ಪಾದಕ ದಾಳಿಯ ಸಂತ್ರಸ್ತರನ್ನು ಸ್ಮರಿಸಿದ ಸಚಿವರು, ಆಪರೇಷನ್ ಸಿಂಧೂರ್ ಮೂಲಕ ಭಾರತ ಭಯೋತ್ಪಾದನೆಯ ಕೇಂದ್ರ ಬಿಂದುಗಳಿಗೆ ತಕ್ಕ ಶಿಕ್ಷೆ ನೀಡುವ ಮೂಲಕ ತನ್ನ ದೃಢಸಂಕಲ್ಪವನ್ನು ಈಗಾಗಲೇ ಸಾಬೀತುಪಡಿಸಿದೆ ಎಂದರು.

ಭಯೋತ್ಪಾದಕರಿಗೆ ಆಶ್ರಯ ಮತ್ತು ಕುಮ್ಮಕ್ಕು ನೀಡುವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಎಸ್‌ಸಿಒ ಹಿಂಜರಿಯಬಾರದು ಎಂದ ಸಚಿವರು, ಪ್ರಾದೇಶೀಕ ಭದ್ರತೆ ಮತ್ತು ಶಾಂತಿಗಾಗಿ ಸದಸ್ಯ ರಾಷ್ಟ್ರಗಳ ನಡುವೆ ಪರಸ್ಪರ ನಂಬಿಕೆ ಮತ್ತು ಸಹಕಾರ ಅಗತ್ಯ ಎಂದು ಪ್ರತಿಪಾದಿಸಿದರು.

****************

ಪಶ್ಚಿಮ ಬಂಗಾಳದಲ್ಲಿ ನಾಳೆ ಎರಡನೇ ಹಂತದ ವಿಧಾನಸಭಾ ಚುನಾವಣೆಯ ಮತದಾನ ನಡೆಯಲಿದೆ.

ಈ ಹಿನ್ನೆಲೆಯಲ್ಲಿ ಚುನಾವಣೆ ನಡೆಯಲಿರುವ ೧೪೨ ಕ್ಷೇತ್ರಗಳಲ್ಲಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ.

ಮುಕ್ತ ಮತ್ತು ಶಾಂತಿಯುತ ಮತದಾನವನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗ ನೀಡಿರುವ ನಿರ್ದೇಶನದಂತೆ ಪೊಲೀಸರು ತೀವ್ರ ಬಂದೋಬಸ್ತ ಕೈಗೊಂಡಿದ್ದಾರೆ.

ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಕೇಂದ್ರ ಪಡೆಗಳು ವಿವಿಧ ಜಿಲ್ಲೆಗಳಲ್ಲಿ ಪಥಸಂಚಲನ, ರೂಟ್‌ಮಾರ್ಚ್ ಮತ್ತು ಚೆಕ್‌ಪೋಸ್ಟ್ ತಪಾಸಣೆಯನ್ನು ನಡೆಸಿವೆ.

ಪೊಲೀಸರು ಭದ್ರತಾ ಕಾರ್ಯಾಚರಣೆ ತೀವ್ರಗೊಳಿಸಿದ್ದು, ಚುನಾವಣೆ ನಡೆಯಲಿರುವ ಜಿಲ್ಲೆಗಳಲ್ಲಿ ಈವರೆಗೆ ೨ ಸಾವಿರದ ೩೦೦ಕ್ಕೂ ಅಧಿಕ ಬಂಧಿತ ಕಿಡಿಗೇಡಿಗಳನ್ನು ವಿವಿಧ ಕಾರಣಗಳಿಗೆ ಬಂಧಿಸಿದ್ದಾರೆ.

****************

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯಿಂದಾಗಿ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಅನಿಶ್ಚಿತತೆ ಕಂಡುಬಂದಿದ್ದರೂ, ದೇಶದಲ್ಲಿ ಸದ್ಯಕ್ಕೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ನವದೆಹಲಿಯಲ್ಲಿ ನಡೆದ ಅಂತರ್-ಸಚಿವಾಲಯಗಳ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶದಲ್ಲಿ ಇಂಧನ ಮತ್ತು ಅಡುಗೆ ಅನಿಲದ ದಾಸ್ತಾನು ಸಮರ್ಪಕವಾಗಿದ್ದು, ಸಾರ್ವಜನಿಕರು ಆತಂಕಕ್ಕೆ ಒಳಗಾಗಿ ಮುಂಗಡ ಖರೀದಿ ಅಥವಾ ಸಂಗ್ರಹಣೆಗೆ ಮುಂದಾಗಬಾರದು ಎಂದು ಮನವಿ ಮಾಡಿದ್ದಾರೆ.

ಪಶ್ಚಿಮ ಏಷ್ಯಾದ ಬಿಕ್ಕಟ್ಟಿನಿಂದಾಗಿ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲದ ಆಮದಿನ ಮೇಲೆ ಅಲ್ಪಮಟ್ಟದ ಪರಿಣಾಮ ಬೀರಿದ್ದರೂ, ದೇಶೀಯ ಗ್ರಾಹಕರಿಗೆ ನೂರಕ್ಕೆ ನೂರರಷ್ಟು ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಅವರು ತಿಳಿಸಿದ್ದಾರೆ.

ವಿಶೇಷವಾಗಿ ಆಸ್ಪತ್ರೆಗಳು, ಶಿಕ್ಷಣ ಸಂಸ್ಥೆಗಳು, ಔಷಧ ತಯಾರಿಕೆ, ಉಕ್ಕು ಮತ್ತು ಕೃಷಿಯಂತಹ ಪ್ರಮುಖ ವಲಯಗಳಿಗೆ ಇಂಧನ ಪೂರೈಕೆಯಲ್ಲಿ ಆದ್ಯತೆ ನೀಡಲಾಗುತ್ತಿದೆ. ಅಲ್ಲದೆ, ವಲಸೆ ಕಾರ್ಮಿಕರ ಹಿತದೃಷ್ಟಿಯಿಂದ ಅವರು ಹೆಚ್ಚಾಗಿ ಬಳಸುವ ೫ ಕೆಜಿ ತೂಕದ ಎಲ್‌ಪಿಜಿ

ಸಿಲಿಂಡರ್‌ಗಳ ಪೂರೈಕೆಯನ್ನು ದುಪ್ಪಟ್ಟುಗೊಳಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

***************

ದೇಶಾದ್ಯಂತ ತಾಪಮಾನ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಕಾರ್ಮಿಕರನ್ನು ಬಿಸಿಗಾಳಿಯಿಂದ ರಕ್ಷಿಸಲು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ತುರ್ತು ಮಾರ್ಗಸೂಚಿ ಪ್ರಕಟಿಸಿದೆ.

ವಿಶೇಷವಾಗಿ ಕಟ್ಟಡ ನಿರ್ಮಾಣ, ಇಟ್ಟಿಗೆಗೂಡು ಮತ್ತು ದಿನಗೂಲಿ ಕೆಲಸಗಾರರ ಹಿತರಕ್ಷಣೆಗಾಗಿ ಕೆಲಸದ ಸ್ಥಳಗಳಲ್ಲಿ ಸಮರ್ಪಕ ಕುಡಿಯುವ ನೀರು, ವಿಶ್ರಾಂತಿ ಕೊಠಡಿ ಹಾಗೂ ತಂಪಾದ ವಾತಾವರಣ ಕಲ್ಪಿಸಲು ಉದ್ಯೋಗದಾತರಿಗೆ ಸೂಚನೆ ನೀಡಲಾಗಿದೆ. ಇದರ ಜೊತೆಗೆ ಇಎಸ್‌ಐ ಆಸ್ಪತ್ರೆಗಳಲ್ಲಿ ಬಿಸಿಗಾಳಿಯಿಂದ ತೊಂದರೆಗೆ ಒಳಗಾದವರಿಗೆ ಪ್ರತ್ಯೇಕ ಸಹಾಯಕೇಂದ್ರಗಳನ್ನು ಸ್ಥಾಪಿಸಲು ಒಆರ್‌ಎಸ್ ಸೇರಿದಂತೆ ಅಗತ್ಯ ವೈದ್ಯಕೀಯ ಸಮಗ್ರಿಗಳನ್ನು ದಾಸ್ತಾನು ಇಟ್ಟುಕೊಳ್ಳಲು ನಿರ್ದೇಶಿಸಲಾಗಿದೆ.

ಕಾರ್ಮಿಕರ ನಿಯಮಿತ ಆರೋಗ್ಯ ತಪಾಸಣೆಗೆ ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವಂತೆ ತಿಳಿಸಿರುವ ಸಚಿವಾಲಯ ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮಗಳ ಬಗ್ಗೆ ೧೫ ದಿನಗಳಿಗೊಮ್ಮೆ ವರದಿ ಸಲ್ಲಿಸಲು ಆದೇಶಿಸಿದೆ.

***************

ಪ್ರಸಕ್ತ ಶೈಕ್ಷಣಿಕ ಸಾಲಿಗಾಗಿ ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ಎನ್‌ಸಿಇಆರ್‌ಟಿ ಪ್ರಕಟಿಸಿರುವ ಪಠ್ಯಪುಸ್ತಕಗಳ ಲಭ್ಯತೆ, ಮುದ್ರಣ ಮತ್ತು ವಿತರಣಾ ಪ್ರಕ್ರಿಯೆಯನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಪರಿಶೀಲಿಸಿದರು.

ಈ ಕುರಿತು ಮಾಹಿತಿ ನೀಡಿರುವ ಶಿಕ್ಷಣ ಸಚಿವಾಲಯ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿನ ಪಠ್ಯಪುಸ್ತಕಗಳ ದಾಸ್ತಾನು ಸ್ಥಿತಿಗತಿ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ

ಪುಸ್ತಕಗಳು ಸಮಯಕ್ಕೆ ಸರಿಯಾಗಿ ತಲುಪುತ್ತವೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿಗಳೊಂದಿಗೆ ಸಚಿವರು ಸಮಾಲೋಚಿಸಿದ್ದಾರೆ ಎಂದು ತಿಳಿಸಿದೆ.

***************

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ನವದೆಹಲಿಯಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷೆ ಅನ್ನಾಲೆನಾ ಬೇರ್‌ಬಾಕ್ ಅವರನ್ನು ಭೇಟಿಯಾದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿದೇಶಾಂಗ ಸಚಿವರು, ಯುಎನ್೮೦ ಉಪಕ್ರಮ, ಸುಸ್ಥಿರ ಅಭಿವೃದ್ಧಿ ಗುರಿಗಳು, ಕೃತಕ ಬುದ್ಧಿಮತ್ತೆಯ ಪರಿಣಾಮಗಳು ಮತ್ತು ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಬಗ್ಗೆ ಚರ್ಚಿಸಿರುವುದಾಗಿ ತಿಳಿಸಿದರು.

***************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಕರ್ನಾಟಕದ ಉಡುಪಿಯಲ್ಲಿ 'ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಜೆಮ್ಸ್ ಆಂಡ್ ಜ್ಯುವೆಲ್ಲರಿ'ಯ ನೂತನ ಕಟ್ಟಡವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಹೊಸ ತರಬೇತಿ ಸಂಸ್ಥೆಯು ಯುವಕರಿಗೆ ಮತ್ತು ಯುವ ಉದ್ಯಮಿಗಳಿಗೆ ವೃತ್ತಿಪರ ತರಬೇತಿಯನ್ನು ನೀಡಲಿದೆ ಎಂದು ತಿಳಿಸಿದರು.

***************

ಸಮೋವಾದಲ್ಲಿ ನಡೆಯುತ್ತಿರುವ ಕಾಮನ್‌ವೆಲ್ತ್ ಯೂತ್ ಮತ್ತು ಜೂನಿಯರ್ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನ ಎರಡನೇ ದಿನ ಭಾರತದ ಕ್ರೀಡಾಪಟುಗಳು ನಾಲ್ಕು ಚಿನ್ನದ ಪದಕಗಳನ್ನು ಜಯಿಸುವ ಮೂಲಕ ಅಮೋಘ ಸಾಧನೆ ಮಾಡಿದ್ದಾರೆ.

೬೫ ಕೆಜಿ ವಿಭಾಗದಲ್ಲಿ ಸುನಿಲ್ ಸಿಂಗ್, ೫೮ ಕೆಜಿ ವಿಭಾಗದಲ್ಲಿ ಐಸಾಂಗ್ಫಾ ಗೊಗೊಯ್ ಮತ್ತು ೭೧ ಕೆಜಿ ವಿಭಾಗದಲ್ಲಿ ಅಭಿನೋಬ್ ಗೊಗೊಯ್ ಚಿನ್ನದ ಪದಕ ಮುಡಿಗೇರಿಸಿಕೊಂಡರೆ, ಯುನಿವರ್ಸಲ್ ಕಪ್‌ನ ೬೫ ಕೆಜಿ ವಿಭಾಗದಲ್ಲಿ ಅರುಣಾಚಲ ಪ್ರದೇಶದ ಚಾರು ಪೇಸಿ ಚಿನ್ನದ ಪದಕ ಗೆದ್ದಿದ್ದಾರೆ.

ಭಾರತೀಯ ವೇಟ್‌ಲಿಫ್ಟಿಂಗ್ ಒಕ್ಕೂಟದ ಅಧ್ಯಕ್ಷ ಸಹದೇವ್ ಯಾದವ್, ಕ್ರೀಡಾಪಟುಗಳ ಈ ಯಶಸ್ಸನ್ನು ಶ್ಲಾಘಿಸಿದ್ದು, ಇದು ಜಾಗತಿಕ ವೇಟ್‌ಲಿಫ್ಟಿಂಗ್ ರಂಗದಲ್ಲಿ ಭಾರತದ ಬೆಳೆಯುತ್ತಿರುವ ಶಕ್ತಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ.

****************

ಆಸ್ತಿ ವಂಚನೆ ಅಥವಾ ನಕಲಿ ದಾಖಲೆ ಪ್ರಕರಣಗಳಲ್ಲಿ, ವಂಚನೆಯಲ್ಲಿ ನೇರ ಭಾಗಿಯಾಗಿರುವ ಬಗ್ಗೆ ಸ್ಪಷ್ಟ ಪುರಾವೆಗಳಿಲ್ಲದೆ ಕೇವಲ ಆಸ್ತಿ ಖರೀದಿಸಿದ ವ್ಯಕ್ತಿಯನ್ನು ಕ್ರಿಮಿನಲ್ ವಿಚಾರಣೆಗೆ ಒಳಪಡಿಸುವುದು ಸರಿಯಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ.

ತಮಿಳುನಾಡಿನ ಹಳೆಯ ಆಸ್ತಿ ವಿವಾದವೊಂದಕ್ಕೆ ಸಂಬಂಧಿಸಿದಂತೆ ಮದ್ರಾಸ್ ಹೈಕೋರ್ಟ್ ನೀಡಿದ್ದ ಆದೇಶವನ್ನು ರದ್ದುಗೊಳಿಸಿ ನ್ಯಾಯಮೂರ್ತಿಗಳಾದ ವಿಕ್ರಂ ನಾಥ್ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ಈ ತೀರ್ಪು ನೀಡಿದೆ.

********ಮುಕ್ತಾಯ********